**ಇಂದು ದಿನಾಂಕಃ 15-03-2025 ಸಾಕ್ಷಿಗೆ ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದ :-**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಹೇಳಿಕೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-**

ದಿನಾಂಕಃ 08-06-2021 ರಂದು ಬೆಳಿಗ್ಗೆ 12-30 ಗಂಟೆ ಸುಮಾರಿಗೆ ಆರೋಪಿತರೆಲ್ಲರೂ ಬಂದು ನನ್ನ ತಂದೆಗೆ ಅವಾಚ್ಯ ಶಬ್ದಗಳಿಂದ ಬೈದು ಹೊಡೆಬಡೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಮಧ್ಯಾಹ್ನ .3-30 ಗಂಟೆ ಸುಮಾರಿಗೆ ನನ್ನ ತಂದೆ ಆರೋಪಿತರ ಮನೆ ಹತ್ತಿರ ಹೋದಾಗ ಆರೋಪಿತರೆಲ್ಲರೂ ನನ್ನ ತಂದೆಗೆ ಕೈಯಿಂದ ಬೆನ್ನಿನ ಮೇಲೆ ಬಡಿಗೆಯಿಂದ ಹೊಡೆದಿದ್ದರು ಎಂದರೆ ಸರಿಯಲ್ಲ. ಆರೋಪಿತರು ನನ್ನ ತಾಯಿಯ ಸೀರೆ ಮತ್ತು ತಲೆ ಕೂದಲು ಹಿಡಿದು ಎಳೆದಾಡಿ ಅವಮಾನ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನ್ನ ತಂದೆಗೆ ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ 9 ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿತರ ಪರವಾಗಿ ಶ್ರೀ VBD ವಕೀಲರಿಂದಃ-**

ನನ್ನ ಮುಖ್ಯವಿಚಾರಣೆಯಲ್ಲಿರುವ ಸಂಗತಿಗಳು ಜರುಗಿಲ್ಲ ಎಂದರೆ ಸರಿ. ದಿನಾಂಕಃ 08-06-2021 ರಂದು ನಾನು ನಮ್ಮ ಊರಿನಲ್ಲಿ ಇರಲಿಲ್ಲ ಮತ್ತು ಬೇರೆ ಊರಿಗೆ ಹೋಗಿದ್ದೆ ಎಂದರೆ ಸರಿ. ಆರೋಪಿತರ ಮತ್ತು ನಮ್ಮ ಮಧ್ಯ ಯಾವುದೇ ಜಗ ಆಗಿಲ್ಲ ಎಂದರೆ ಸರಿ. ನನ್ನ ತಂದೆ ಈ ದಿನ ನ್ಯಾಯಾಲಯಕ್ಕೆ ಕರೆದುಕೊಂಡು ಬಂದ ಕಾರಣ ಬಂದಿದ್ದೇನೆ ಎಂದರೆ ಸರಿ. ಆರೋಪಿತರು ನನ್ನ ತಂದೆಗೆ ಹಲ್ಲೆ ಮಾಡಿಲ್ಲ ಎಂದರೆ ಸರಿ. ಆರೋಪಿತರು ನನ್ನ ತಾಯಿಯ ಸೀರೆ ಮತ್ತು ತಲೆ ಕೂದಲು ಹಿಡಿದು ಎಳೆದಾಡಿ ಅವಮಾನ ಮಾಡಿಲ್ಲ ಎಂದರೆ ಸರಿ.

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**C/C. ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**